# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಸ್.ಗೋಪೀನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 981 |
| ಉತ್ತರಿಸಬೇಕಾದ ದಿನಾಂಕ | 11.03.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ-ನಗರ (ಪಿ.ಎಂ.ಎವೈ-ಯು) ಅಥವಾ ಯಾವುದೇ ಇತರ ಕೇಂದ್ರ ಪ್ರಾಯೋಜಿತ ಯೋಜನೆಯಡಿಯಲ್ಲಿ ಕೈಗೊಂಡ ಕೊಳಗೇರಿ ಪುನರ್ವಸತಿ ಯೋಜನೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ಪ್ರಸ್ತುತ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಸ್ ಯೋಜನೆಯನ್ನು ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ\|\| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಮತ್ತು ವಾಜಪೇಯಿ ನಗರ ವಸತಿ ಯೋಜನೆಯನ್ನು ಸಂಯೋಜನೆಗೊಳಿಸಿ ರಾಜ್ಯಾದ್ಯಂತ ವಿವಿಧ ಕೊಳಗೇರಿ ಪ್ರದೇಶಗಳಲ್ಲಿ ಒಟ್ಟು 1,80,253 (AHP) ಮನೆಗಳ ನಿರ್ಮಾಣಕ್ಕೆ 2015-16ನೇ ಸಾಲಿನಿಂದ 2018-19ನೇ ಸಾಲಿನ ವರೆಗೆ ವಿವಿಧ ಹಂತಗಳಲ್ಲಿ ಮಂಜೂರಾತಿ ದೊರೆತಿರುತ್ತದೆ.<br><br>ಸದರಿ ಯೋಜನೆಯಡಿ ಬೆಂಗಳೂರು ನಗರ ಜಿಲ್ಲೆಗೆ 32875 ಮನೆಗಳು ಮಂಜೂರಾಗಿರುತ್ತವೆ. ಇವುಗಳ ಪೈಕಿ 13697 ಮನೆಗಳು ಪೂರ್ಣಗೊಂಡಿರುತ್ತದೆ. 7659 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು, 11519 ಮನೆಗಳನ್ನು ಪ್ರಾರಂಭಿಸಬೇಕಾಗಿರುತ್ತದೆ.<br><br>ಈ ಯೋಜನೆಯಡಿ ಪ್ರಥಮ ಹಂತದಲ್ಲಿ 7966 ಮನೆಗಳನ್ನು ಮಾರ್ಚ್ 2024 ರಲ್ಲಿ ಹಾಗೂ 2ನೇ ಹಂತದಲ್ಲಿ 5731 ಮನೆಗಳನ್ನು ದಿನಾಂಕ:24.01.2026ರಂದು ಸನ್ಮಾನ್ಯ ಮುಖ್ಯಮಂತ್ರಿರವರು ಲೋಕಾರ್ಪಣೆ ಮಾಡಿ ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. |
| ಆ) | ಈ ಯೋಜನೆಗಳ ಅಡಿಯಲ್ಲಿ ಪುನರ್ವಸತಿ ಪಡೆದ ಒಟ್ಟು ಕೊಳಗೇರಿ ನಿವಾಸಿಗಳ ಸಂಖ್ಯೆ ಎಷ್ಟು; ಮತ್ತು ನಿರ್ಮಿಸಿದ ಮತ್ತು ಹಂಚಿಕೆ ಮಾಡಲಾದ ವಸತಿ ಘಟಕಗಳ ಸಂಖ್ಯೆ ಎಷ್ಟು; | |
| ಇ) | ಕೊಳಗೇರಿ ಪುನಾರಾಭಿವೃದ್ಧಿ ಯೋಜನೆಗಳಿಗೆ ಮಂಜೂರಾದ, ಬಿಡುಗಡೆ ಮಾಡಿದ ಮತ್ತು ಬಳಸಲಾದ ಕೇಂದ್ರ ನೆರವಿನ ಮೊತ್ತ ಎಷ್ಟು? (ವಿವರ ನೀಡುವುದು) | ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ\|\| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಮತ್ತು ವಾಜಪೇಯಿ ನಗರ ವಸತಿ ಯೋಜನೆಯನ್ನು ಸಂಯೋಜನೆಗೊಳಿಸಿ ರಾಜ್ಯಾದ್ಯಂತ ವಿವಿಧ ಕೊಳಗೇರಿ ಪ್ರದೇಶಗಳಲ್ಲಿ ಒಟ್ಟು 1,80,253 (AHP) ಮನೆಗಳ ನಿರ್ಮಾಣಕ್ಕೆ 2015-16ನೇ ಸಾಲಿನಿಂದ 2018-19ನೇ ಸಾಲಿನ ರವರೆಗೆ ವಿವಿಧ ಹಂತದಲ್ಲಿ ಮಂಜೂರಾತಿ ದೊರೆತಿರುತ್ತದೆ. ಈ ಪೈಕಿ 1653 ಮನೆಗಳನ್ನು ಕೇಂದ್ರ ಸರ್ಕಾರವು ರದ್ದುಗೊಳಿಸಿರುತ್ತದೆ. 178600 ಮನೆಗಳು ವಿವಿಧ ಹಂತದಲ್ಲಿರುತ್ತದೆ. ಸದರಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಮಂಜೂರಾದ, ಬಿಡುಗಡೆಯಾದ ಮತ್ತು ಬಳಸಲಾದ ಕೇಂದ್ರ ನೆರವಿನ ಮೊತ್ತದ ವಿವರಗಳು ಈ ಕೆಳಕಂಡಂತಿವೆ. |

| ಯೋಜನೆಗಳ ಸಂಖ್ಯೆ | ಮಂಜೂರಾದ ಮನೆಗಳ ಸಂಖ್ಯೆ | ಯೋಜನಾ ಮೊತ್ತ | ಕೇಂದ್ರ ಸರ್ಕಾರದ ನೆರವು (ರೂ. ಕೋಟಿಗಳಲ್ಲಿ) | | |
|---|---|---|---|---|---|
| | | | ಮಂಜೂರಾದ ಮೊತ್ತ | ಬಿಡುಗಡೆಯಾದ ಮೊತ್ತ | ವೆಚ್ಚ |
| 293 | 178600 | 13184.00 | 2679.00 | 1465.82 | 1465.82 |

ಸಂಖ್ಯೆ: ವಇ 35 ಹೆಚ್ಎಫ್ಎ 2026]

(ಬಿ.ಝೆಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.